# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

# Visvesvaraya Technological University

(State University of Government of Karnataka Established as per the VTU Act, 1994)
"Jnana Sangama" Belagavi-590018, Karnataka, India
ರಾಷ್ಟ್ರೀಯ ಸೇವಾ ಯೋಜನೆ

ಪ್ರೊ. ಬಿ.ಈ. ರಂಗಸ್ವಾಮಿ ಪಿಹೆಚ್.ಡಿ.
ಕುಲಸಚಿವರು

ದೂರವಾಣಿ ಸಂ : 0831-2405468
ಫ್ಯಾಕ್ಸ ಸಂ : 0831-2405467


ಸಂ. ವಿತಾವಿ/ಬಿ.ಜಿ.ಎಮ್/ರಾ.ಸೇ.ಯೋ–ಸುತ್ತೋಲೆ/2023-24/906.

ದಿನಾಂಕ: 18 AUG 2023

**:ಸುತ್ತೋಲೆ:**

**ವಿಷಯ:** Learn to Learn **("ಕಲಿಯಿರಿ ಮತ್ತು ಕಲಿಸಿರಿ")** ಕಾರ್ಯಕ್ರಮವನ್ನು ಎನ್.ಎಸ್.ಎಸ್. ಸ್ವಯಂ ಸೇವಕ/ಸೇವಕಿಯರು ಮೂಲಕ ಸ್ವಯಂ ಪ್ರೇರಿತವಾಗಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಅನುಷ್ಠಾನಗೊಳಿಸುವ ಕುರಿತು.

**ಉಲ್ಲೇಖ:** ಯುಸೇಇ/ರಾಸೇಯೋ/19/2021-22/2023-24/218 ದಿನಾಂಕ: 10.08.2023

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯ ಎನ್.ಎಸ್.ಎಸ್. ಕೋಶ, ಯುಸೇಇ, ಬೆಂಗಳೂರು ಮತ್ತು ಯುವಕ ಸಂಘದ ಸಹಯೋಗದೊಂದಿಗೆ ( Environmental Education, Science &Technology, Career guidance & counseling) (ಪರಿಸರ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ, ವೃತಿ ಸಲಹೆ ಹಾಗೂ ಸಮಾಲೋಚನೆ) ವಿಷಯಗಳ ಕುರಿತು ವಿಶೇಷ ಕಲಿಕೆಯ ಶಿಕ್ಷಣದೊಂದಿಗೆ ಚಟುವಟಿಕೆ ಆಧಾರಿತ ಬೋಧನಯಾಗಿ Learn to Learn **("ಕಲಿಯಿರಿ ಮತ್ತು ಕಲಿಸಿರಿ")** ಕಾರ್ಯಕ್ರಮವನ್ನು ಯೋಜಿಸಲಾಗಿದೆ. ಸದರಿ ಯೋಜನೆಯು ತಳಮಟ್ಟದಲ್ಲಿ ವಿದ್ಯಾರ್ಥಿಗಳ ವರ್ತನೆಯ ಬದಲಾವಣೆಗಾಗಿ ತರಬೇತಿ ನೀಡುವುದರ ಮೂಲಕ ಯೋಜನಾ ಮಾದರಿಗಳ ಬಗ್ಗೆ ಯೋಚಿಸಲು ಅವರನ್ನು ಪ್ರೇರೇಪಿಸುತ್ತದೆ. ಇದು ವಿಜ್ಞಾನ ಮತ್ತು ಡಿಜಿಟಲೀಕರಣದ ಏಕೀಕರಣದೊಂದಿಗೆ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಅನುಭವವನ್ನು ಸುಧಾರಿಸಲು ಹಾಗೂ ಮುಂದಿನ ಪೀಳಿಗೆಯನ್ನು ಸಶಕ್ತಗೊಳಿಸಲು ಸರ್ಕಾರಿ ಪ್ರೌಢಶಾಲೆಗಳಲ್ಲಿ ಮಕ್ಕಳ ಸಮಗ್ರ ಅಭಿವೃದ್ಧಿಗೆ ಅವಕಾಶಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ.

ಸದರಿ, ಕಾರ್ಯಕ್ರಮ ಅನುಷ್ಠಾನದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂ ಸೇವಕ/ಸೇವಕಿಯರ ಸಹಕಾರವನ್ನು ಬಯಸಿದ್ದಾರೆ. ಅದರಂತೆ ಎನ್.ಎಸ್.ಎಸ್. ಘಟಕಗಳ ಕಾರ್ಯಕ್ರಮಾಧಿಕಾರಿಗಳು ಮತ್ತು ಯೋಜನಾಧಿಕಾರಿಗಳು ಕೈಜೋಡಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಹಕರಿಸುವಂತೆ ಕೋರಲಾಗಿದೆ ಹಾಗೂ ತಮ್ಮ ಕಾಲೇಜಿನ ಎನ್.ಎಸ್.ಎಸ್ ಸ್ವಯಂ ಸೇವಕ/ಸೇವಕಿಯರು ಭಾಗವಹಿಸಲು ಸೂಕ್ತಕ್ರಮ ಕೈಗೊಳ್ಳಬೇಕೆಂದು ಸೂಚಿಸಲು ಕೋರಲಾಗಿದೆ.

<u>ಹೆಚ್ಚಿನ ಮಾಹಿತಿಗಾಗಿ</u>: **ಶ್ರೀ. ಗುರುಪ್ರಸಾದ್,** ಯೋಜನಾ ಸಂಯೋಜಕರು ಯುವಕ ಸಂಘ, ಬೆಂಗಳೂರು (ಮೊಬೈಲ್ ನಂ.97382 62440 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

ವಂದನೆಗಳೊಂದಿಗೆ,

Rangaswamy BE 18/08/23

**ಕುಲಸಚಿವರು**

*ಇವರಿಗೆ,*

ಪ್ರಾಂಶುಪಾಲರು ಮತ್ತು ಸಂಯೋಜನಾಧಿಕಾರಿಗಳು,
ವಿ.ತಾ.ವಿ. ಅಧಿನಕ್ಕೊವಳಪಡುವ ಸಂಬಂದಪಟ್ಟ
ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

*ಪ್ರತಿಯನ್ನು ಮಾಹಿತಿಗಾಗಿ:*

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ರಾಜ್ಯ ಎನ್.ಎಸ್.ಎಸ್. ಅಧಿಕಾರಿಗಳು ರಾ.ಸೇ.ಯೋ. ಕೋಶ, ಯುಸೇಇ, ಬೆಂಗಳೂರು.
3. ವಿಶೇಷಾಧಿಕಾರಿಗಳು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ಕಛೇರಿ ಪ್ರತಿ.